# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☏ : 0816-2255650, 2273511 ಫ್ಯಾಕ್ಸ್ :0816-2270719

ಸಂಖ್ಯೆ:ತುವಿ: ಪ.ವಿ:ಬಿ.ಇಡಿ.:ಪ.ಶುಲ್ಕ.:2019-20 : 511 ದಿನಾಂಕ:09.12.2019

## ಅಧಿಸೂಚನೆ

**ವಿಷಯ:** ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವ ಕುರಿತು.

**ಉಲ್ಲೇಖ :** 1. ಕ.ಸ. ತಿದ್ದುಪಡಿ ಮತ್ತು ಸೇರ್ಪಡೆ ಆದೇಶ ಸಂಖ್ಯೆ : ಹಿಂವಕ 589 ಬಿಎಂಎಸ್ 2013 ದಿನಾಂಕ: 06.08.2014

2. ಕ.ಸ. ಆದೇಶ ಸಂಖ್ಯೆ : ಹಿಂವಕ 589 ಬಿಎಂಎಸ್ 2013 ದಿನಾಂಕ: 05.10.2013
3. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಪ್ರಕಟಣೆ ಸಂಖ್ಯೆ / ಹಿಂವಕ/ ವಿವೇ/ಸಿಆರ್-34 /2014-15 ದಿನಾಂಕ: 19.09.2014
4. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 07.12.2019

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020 ರ ಫೆಬ್ರವರಿ ಮಾಹೆಗಳಲ್ಲಿ ನಡೆಯಲಿರುವ ಸ್ನಾತಕ ಶಿಕ್ಷಣ (B.Ed.) ಪದವಿಯ CBCS ಪಠ್ಯಕ್ರಮದಂತೆ ಈ ಕೆಳಕಂಡ ಸಾಲುಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

1. **2016-17 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಸ್ನಾತಕ ಶಿಕ್ಷಣ ಪದವಿಯ ಅರ್ಹ ವಿದ್ಯಾರ್ಥಿಗಳಿಂದ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ (ಪೂರಕ) ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.**
2. 2017-18 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಅರ್ಹ ವಿದ್ಯಾರ್ಥಿಗಳಿಂದ ನಾಲ್ಕನೇ ಸೆಮಿಸ್ಟರ್ (ನವೀನ) ಮತ್ತು ದ್ವಿತೀಯ ಸೆಮಿಸ್ಟರ್ (ಪೂರಕ) ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.
3. 2018-19 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಅರ್ಹ ವಿದ್ಯಾರ್ಥಿಗಳಿಂದ ತೃತೀಯ ಸೆಮಿಸ್ಟರ್ (ನವೀನ) ಮತ್ತು ಪ್ರಥಮ ಸೆಮಿಸ್ಟರ್ (ಪೂರಕ) ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.
4. 2019-20 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಅರ್ಹ ವಿದ್ಯಾರ್ಥಿಗಳಿಂದ ಪ್ರಥಮ ಸೆಮಿಸ್ಟರ್ (ನವೀನ) ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪರೀಕ್ಷೆಗಳಿಗೆ ಹಾಜರಾಗುವ ಅರ್ಹ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು. ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಆದರೆ ಸಂಬಂಧಿಸಿದ ವಿದ್ಯಾರ್ಥಿಗಳು ಶೈಕ್ಷಣಿಕ ವಿಭಾಗದಿಂದ ಪ್ರವೇಶಾನುಮೋದನೆಯಾದ ವಿಷಯಗಳಿಗೆ / ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ / ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಾಸವಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.

(2 ನೇ ಪುಟಕ್ಕೆ)